ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಗೃಹ - (ಸೈಬರ್ ಕ್ರೈಂ)

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE: 8/6/2020

# ಶಾಸಕರ ಫೇಸ್‌ಬುಕ್ ಹ್ಯಾಕ್ ಮಾಡಿ ಹಣ ವಸೂಲಿಗೆ ಯತ್ನ!

## ಗಂಗಾವತಿ ಶಾಸಕ ಪರಣ್ಣ ಮುನವಳ್ಳಿ ಖಾತೆ ಹ್ಯಾಕ್

**ಕೊಪ್ಪಳ:** ಗಂಗಾವತಿ ಶಾಸಕ ಪರಣ್ಣ ಮುನವಳ್ಳಿ ಅವರ ಫೇಸ್‌ಬುಕ್ ಖಾತೆಯನ್ನು ಹ್ಯಾಕ್ ಮಾಡಿ ಅವರ ಹೆಸರಿನಲ್ಲಿ ನಕಲಿ ಖಾತೆಯನ್ನೂ ತೆರೆದು ಅದರ ಮೂಲಕ ಹಣ ವಸೂಲಿಗೆ ಮುಂದಾಗಿರುವ ಅಂಶ ಬೆಳಕಿಗೆ ಬಂದಿದೆ.



ಶಾಸಕರ ಹೆಸರಿನಲ್ಲಿ ಬ್ಯಾಂಕ್ ಖಾತೆ ತೆರೆದು, ತುರ್ತಾಗಿ ಹಣ ಜಮಾ ಮಾಡಿ ಎಂದು ಬ್ಯಾಂಕ್ ಖಾತೆಯ ಸಂಖ್ಯೆ, ಮೊಬೈಲ್ ಸಂಖ್ಯೆ ನೀಡಲಾಗಿದೆ.

ಅಷ್ಟೇ ಅಲ್ಲ, ಶಾಸಕ ಪರಣ್ಣ ಮುನವಳ್ಳಿ ಅವರ ಫೋಟೋವನ್ನು ಪೋಸ್ಟ್ ಮಾಡಿ, ಅವರೇ ಕೋರಿದಂತೆ ಸಂದೇಶಗಳನ್ನು ಕಳುಹಿಸಿದ್ದಾರೆ.

ಕಾರ್ಯಕರ್ತರು ಮಾಹಿತಿ ನೀಡಿದ ಬಳಿಕ ಶಾಸಕರು ಸೈಬರ್ ಕ್ರೈಂ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಮೊಬೈಲ್ ಸಂಖ್ಯೆಯನ್ನು ಜಾಲಾಡಿದಾಗ ಅದು ರಾಜಸ್ಥಾನದಲ್ಲಿರುವ ಮಾಹಿತಿ ಗೊತ್ತಾಗಿದೆ.